ಕರ್ನಾಟಕ ಸರ್ಕಾರ
ಪೊಲೀಸ್ ಇಲಾಖೆ

ಸಂಖ್ಯೆ:84/ನೇಮಕಾತಿ-2/2019-20

ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ ರವರ ಕಛೇರಿ
ಕಾರ್ಲ್‌ಟನ್ ಭವನ, ಅರಮನೆ ರಸ್ತೆ,
ಬೆಂಗಳೂರು, ದಿನಾಂಕ: 05.06.2020

ವಿಷಯ: ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ & ಮಹಿಳಾ) ಹಾಗೂ ಸೇವಾನಿರತ ಹುದ್ದೆಗಳ ನೇಮಕಾತಿ ಕುರಿತು.

ಉಲ್ಲೇಖ: 1) ಅಧಿಸೂಚನೆ ಸಂಖ್ಯೆ:84/ನೇಮಕಾತಿ-2/2019-20, ದಿನಾಂಕ:18.07.2019
2) ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಣೆ ದಿನಾಂಕ:20.03.2020.
3) ಐ.ಜಿ.ಪಿ. ಉತ್ತರ ವಲಯ, ಬೆಳಗಾವಿ ರವರ ಪತ್ರದ ಸಂಖ್ಯೆ/ಸಿಬ್ಬಂದಿ/74/ ಉ.ವ/2020, ದಿನಾಂಕ:01.06.2020

## ದ್ವಿತೀಯ ತಾತ್ಕಾಲಿಕ ಆಯ್ಕೆ ಪಟ್ಟಿ

1. ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ & ಮಹಿಳಾ) ಹಾಗೂ ಸೇವಾನಿರತ ಹುದ್ದೆಗಳ ನೇಮಕಾತಿಯನ್ನು ಉಲ್ಲೇಖಿತ ಅಧಿಸೂಚನೆಯನ್ವಯ ಕೈಗೊಳ್ಳಲಾಗಿರುತ್ತದೆ. ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡ ನಂತರ ವೃಂದ ಮತ್ತು ನೇಮಕಾತಿ (ತಿದ್ದುಪಡಿ)ನಿಯಮಗಳು, 2009 ಮತ್ತು 2016 ರಲ್ಲಿನ ನಿಯಮಗಳಂತೆ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ತಯಾರಿಸಿ **ಉತ್ತರವಲಯ, ಬೆಳಗಾವಿ** ಘಟಕಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ-2ರನ್ವಯ ದಿನಾಂಕ:20.03.2020 ರಂದು ಪ್ರಕಟಿಸಲಾಗಿರುತ್ತದೆ.

2. ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಪ್ರಕಟಿಸಿದ ನಂತರ ಸದರಿ ಆಯ್ಕೆಪಟ್ಟಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ನಿಯಮಗಳನುಸಾರ ರಚಿಸಲಾಗಿರುವ ವೈದ್ಯಕೀಯ ಮಂಡಳಿಯಿಂದ ವೈದ್ಯಕೀಯ ಪರೀಕ್ಷೆಯನ್ನು ನಡೆಸಲಾಗಿರುತ್ತದೆ. ವೈದ್ಯಕೀಯ ಪರೀಕ್ಷೆ ಪೂರ್ಣಗೊಂಡ ನಂತರ **ಐ.ಜಿ.ಪಿ. ಉತ್ತರವಲಯ, ಬೆಳಗಾವಿ** ರವರು ವೈದ್ಯಕೀಯ ಪರೀಕ್ಷೆಯ ವರದಿಯನ್ನು ಉಲ್ಲೇಖಿತ-3ರನ್ವಯ ಕಳುಹಿಸಿರುತ್ತಾರೆ.

3. ವೃಂದ ಮತ್ತು ನೇಮಕಾತಿ (ತಿದ್ದುಪಡಿ) ನಿಯಮಗಳಾದ **"ಕರ್ನಾಟಕ ರಾಜ್ಯ ಪೊಲೀಸ್ ಲಿಪಿಕ ಸಿಬ್ಬಂದಿಯನ್ನು ಒಳಗೊಂಡಂತೆ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು 2009"** ರಲ್ಲಿ ನಿಗಧಿಪಡಿಸಿರುವಂತೆ ವೈದ್ಯಕೀಯ ಪರೀಕ್ಷೆ ಪೂರ್ಣಗೊಂಡ ನಂತರ ಸದರಿ ವೈದ್ಯಕೀಯ ಪರೀಕ್ಷೆಯ ಫಲಿತಾಂಶವನ್ನು ಆಧಾರಿಸಿ ಆಯ್ಕೆ ಪ್ರಾಧಿಕಾರವು ದ್ವಿತೀಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಬೇಕಾಗಿರುತ್ತದೆ. ಅದರಂತೆ ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) (ಪುರುಷ) ಹುದ್ದೆಗಳಿಗೆ ಮೆರಿಟ್ ಅನುಸಾರ ಅರ್ಹ ಅಭ್ಯರ್ಥಿಗಳ **ಉತ್ತರವಲಯ, ಬೆಳಗಾವಿ** ಘಟಕದ ದ್ವಿತೀಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಿ, ಕೆಳಕಂಡಂತೆ ಪ್ರಕಟಿಸಲಾಗಿರುತ್ತದೆ.

................ 2

ಎ) ಈ ಆಯ್ಕೆ ಪಟ್ಟಿಯು ಸಕ್ಷಮ ಪ್ರಾಧಿಕಾರವು ನೀಡುವ ವಯೋಮಿತಿ/ವಿದ್ಯಾರ್ಹತೆ/ಆಯ್ಕೆ/ಪ್ರವರ್ಗ/ಜಾತಿ/ಗ್ರಾಮೀಣ/ಕನ್ನಡ ಮಾಧ್ಯಮ/ಪಿಡಿಪಿ/ಹಾಗೂ ಇತರೆ ಸಂಬಂಧಪಟ್ಟ ದಾಖಲೆಗಳ ಪರಿಶೀಲನೆಯ ಷರತ್ತುಗಳಿಗೆ ಒಳಪಟ್ಟಿರುತ್ತದೆ.

ಬಿ) ಅಂತೀಮ ನೇಮಕಾತಿಯು ಸೇವಾನಿತರ ಅಭ್ಯರ್ಥಿಗಳ ವಿರುದ್ದ ಬಾಕಿ ಇರುವ ವಾರ್ಷಿಕ ಕಾರ್ಯ ನಿರ್ವಹಣಾ ವರದಿ ಮತ್ತು ಇಲಾಖಾ ವಿಚಾರಣೆಯ ಪರಿಶೀಲನೆಗೆ ಒಳಪಟ್ಟಿರುತ್ತದೆ.

ಸಿ) ಆಯ್ಕೆ ಪಟ್ಟಿಯಲ್ಲಿ ಅಭ್ಯರ್ಥಿಯ ಹೆಸರು ಇದ್ದ ಕಾರಣದಿಂದ ಸದರಿಯವರಿಗೆ ಹುದ್ದೆಯ ನೇಮಕಾತಿಗೆ ಸಂಬಂಧಿಸಿದಂತೆ, ಯಾವುದೇ ರೀತಿಯ ಕಾನೂನಾತ್ಮಕ ಹಕ್ಕು ಇರುವುದಿಲ್ಲ. ಸದರಿ ನೇಮಕಾತಿಯು ಮೇಲ್ಕಂಡಂತೆ ಹೇಳಲಾದ ಷರತ್ತುಗಳಿಗೆ ಒಳಪಟ್ಟಿರುತ್ತದೆ.

ಡಿ) ಈ ಆಯ್ಕೆ ಪಟ್ಟಿಯು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿ / ಮಾನ್ಯ ಉಚ್ಚ ನ್ಯಾಯಾಲಯ / ಮಾನ್ಯ ಭಾರತದ ಸರ್ವೋಚ್ಚ ನ್ಯಾಯಾಲಯದ ಅಂತಿಮ ತೀರ್ಮಾನಗಳಿಗೆ ಒಳಪಟ್ಟಿರುತ್ತದೆ.

**A. SECOND PROVISIONAL SELECT LIST FOR THE POST OF SUB-INSPECTOR OF POLICE (CIVIL) (MEN) (MERITWISE)**

| SL. NO | APPN. NO | ROLL NO | NAME | MARKS SECURED | | TOTAL | SELECTED CATEGORY |
|---|---|---|---|---|---|---|---|
| | | | | P1 | P2 | | |
| 1 | 1651179 | 3735318 | RAJU M PUJARI | 33.5 | 129.75 | 163.25 | GM_OTH |
| 2 | 1647444 | 3742979 | MAHESH MALI | 33.5 | 120.75 | 154.25 | 2A_RUR |
| 3 | 1641479 | 3735806 | BASAGOUD NERLI | 34 | 97.875 | 131.875 | GM_EXS |

ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ ಮತ್ತು ಅಧ್ಯಕ್ಷರು,
ಪಿಎಸ್ಐ (ಸಿವಿಲ್) ನೇಮಕಾತಿ ಸಮಿತಿ,
ಕಾರ್ಲ್‌ಟನ್ ಭವನ, ಅರಮನೆ ರಸ್ತೆ,
ಬೆಂಗಳೂರು.

**ಪ್ರತಿಯನ್ನು**: 1. ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಉತ್ತರವಲಯ, ಬೆಳಗಾವಿ.
2. ಕಛೇರಿ ಕಡತ ಮತ್ತು ಸೂಚನಾ ಫಲಕ.

**ಪ್ರತಿಯನ್ನು ಅಭಿನಂದನೆಗಳೊಂದಿಗೆ**: ಡೈರೆಕ್ಟರ್ ಜನರಲ್ & ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಕರ್ನಾಟಕ ರಾಜ್ಯ, ಬೆಂಗಳೂರು.